ಮೈಸೂರ ಗೆಜೆಟ್

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮಾರ್ಚಿ ತಾ॥ 5, ಸ್ಯ 1887.

ಗಮನ ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೀಲ್ಲಾ ಜಡ್ಜ್ಗೀರು, ವಗ್ಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಫಾರೆಸ್ಟ್ ಇಲಾಖಾ.

ತಾರೀಖು 14ನೇ ಫಿಬ್ರವರೀ 1887.

ಇದರಿಂದ ಪ್ರಕಟಪಡಿಸುವದೇನಂದರೆ, ಫಾರೆಸ್ಟ್ ಇಲಾಖೆಗೆ ಶೇರಿದ, ರೈಲ್‌ವೇ ಕಂಟ್ರಾಕ್ಟ್ದಾರರ ವರ್ಕ್ ಷಾಪ್‌ಯಾನೆ ಖಾರ್ಖಾನೆಯಲ್ಲಿ ಬಿದ್ದಿರುವ 243 ತ್ಯಾಗದ ತುಂಡು ಮತಗಳೂ ಉಡಿಯೂರಡಿನಲ್ಲಿರತಕ್ಕ ಸುಮಾರು 250 ತ್ಯಾಗದ ವ ಇತರಜಾತಿ ದೊಡ್ಡ ಮರಗಳೂ ಸುದಾ, 1887ನೇ ಇಸವಿ ಮಾರ್ಚೀ 10 ವ 11ನೇ ತಾರೀಖುಗಳಲ್ಲಿ ಮೈಸೂರು ಮೊಕ್ತಾಮಿನೊಳಗೆ ಫಾರೆಸ್ಟ್ಸ್ ಸೂಪರಿಂಟೆಂಡೆಂಟರವರಿಂದ ವಿಕ್ರಯಿಸಲ್ಪಡುವದು.

ಷರತ್ತುಗಳು.—1873ನೇ ಇಸವಿ ಜೂನ್ 12ನೇ ಮುಕ್ತಂ 20ನೇ ನಂಬರ್ ಇಸ್ತಿಹಾರ್‌ನಾಮೆಯನ್ನು ನೋಡತಕ್ಕದ್ದು.

ಯಲ್. ರಿಕ್ಕೆಟ್ಸ್,
ಫಾರೆಸ್ಟ್ ಇನ್‌ಸ್ಪೆಕ್ಟರ್ ಜನರಲ್.